# ಪಟೇಲ್ ಪ್ರಧಾನಿಯಾಗಿದ್ರೆ ಪರಿಸ್ಥಿತಿ ಬದಲಾಗುತ್ತಿತ್ತು



**ಬೆಂಗಳೂರು:** ಸರ್ಧಾರ ವಲ್ಲಭಭಾಯ್ ಪಟೇಲ್ ಅವರು ದೇಶದ ಮೊದಲ ಪ್ರಧಾನಿಯಾಗಿದ್ದರೆ ದೇಶದ ಪರಿಸ್ಥಿತಿ ಸುಧಾರಿಸುತ್ತಿತ್ತು ಎಂದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

ವಿಧಾನಸೌಧದಲ್ಲಿ ಕರ್ನಾಟಕ ವಿಧಾನಸಭೆ ಸಚಿವಾಲಯದ ವತಿಯಿಂದ ಏರ್ಪಡಿಸಲಾದ ರಾಷ್ಟ್ರೀಯ ಏಕತಾ ದಿವಸ ಆಚರಣೆ ಕಾರ್ಯಕ್ರಮದಲ್ಲಿ ಸರ್ಧಾರ್ ವಲ್ಲಭಭಾಯಿ ಪಟೇಲ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಪ್ರತಿಜ್ಞಾ ವಿಧಿ ಸ್ವೀಕರಿಸಿ ಮಾತನಾಡಿದರು.

ಅಂದಿನ ಪರಿಸ್ಥಿತಿಯಲ್ಲಿ ಸರ್ಧಾರ ವಲ್ಲಭಭಾಯಿ ಪಟೇಲ್ ಅವರು ಪ್ರಧಾನಮಂತ್ರಿಗಳಾಗಿದ್ದರೆ ದೇಶದ ಪರಿಸ್ಥಿತಿ ಇನ್ನಷ್ಟು ಬದಲಾವಣೆಯಾಗುತ್ತಿತ್ತು. ಅವರಿಗೆ ಅತ್ಯಂತ ನಿಷ್ಠುರವಾದ, ಇಡೀ ಜಗತ್ತಿಗೆ ಮಾದರಿ ಆದಂತಹ ರಾಷ್ಟ್ರ ನಿರ್ಮಾಣದ ಹಂಬಲವಿತ್ತು. ಕೆಲವೊಬ್ಬರು ನಿಧನರಾದರೂ ನಮ್ಮೆದುರಿಗೆ ಜೀವಂತವಾಗಿರುತ್ತಾರೆ ಅಂಥವರಲ್ಲಿ ಸರ್ಧಾರ ವಲ್ಲಭಭಾಯ್ ಪಟೇಲ್ ಅವರು ಒಬ್ಬರು ಎಂದರು.

ರಾಷ್ಟ್ರೀಯ ಏಕತಾ ದಿವಸದ ಪ್ರತಿಜ್ಞಾ ವಿಧಿ ಬೋಧಿಸಿದ ನಂತರ ಮಾತನಾಡಿದ ವಿಧಾನಸಭೆಯ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ, ನಮ್ಮ ದೇಶ ಮೊದಲು ಎಂಬ ಭಾವನೆ ನಮ್ಮಲ್ಲಿ ನಿರ್ಮಾಣವಾಗಬೇಕು. ಸ್ವಾತಂತ್ರ್ಯಪೂರ್ವದಲ್ಲಿ ಹೋರಾಟ ಮಾಡಿದ ನಮ್ಮೆಲ್ಲರ ಹಿರಿಯ ನಾಯಕರುಗಳು ದೇಶಕ್ಕಾಗಿ ತಮ್ಮನ್ನು ಸಮರ್ಪಿಸಿಕೊಂಡರು ಹಾಗೂ ಅವರ ತ್ಯಾಗ ಬಲಿದಾನ ಇತಿಹಾಸದ ಸ್ಫೂರ್ತಿಯ ಪುಟಗಳು ಸದಾ ಪ್ರೇರಣೆಗೊಳ್ಳುವಂತಹದು. ಸ್ವಾತಂತ್ರ್ಯ ಹೋರಾಟದಲ್ಲಿ, ಸ್ವಾತಂತ್ರ್ಯ ನಂತರದ ಭಾರತ ಸರ್ಕಾರದಲ್ಲಿ ಅನೇಕ ಹಿರಿಯರು ಅತ್ಯುತ್ತಮ ವಾದಂತಹ ಕೆಲಸಗಳನ್ನು ಮಾಡಿದ್ದರು. ಅವರ ಸಾಲಿನಲ್ಲಿ ಅಗ್ರಗಣ್ಯನಾಗಿ ಸರ್ಧಾರ್ ವಲ್ಲಭಭಾಯ್ ಪಟೇಲ್ ಅವರು ನಿಲ್ಲುತ್ತಾರೆ ಎಂದು ಹೇಳಿದರು.

ವಿಧಾನ ಪರಿಷತ್ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮಿ ವಿಧಾನಸಭೆಯ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಇದ್ದರು.